# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 01. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 527 |
| 02. | ಮಾನ್ಯ ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) |
| 03. | ಉತ್ತರಿಸುವ ದಿನಾಂಕ | : | 16.09.2021 |
| 04. | ಉತ್ತರಿಸುವ ಸಚಿವರು. | : | ಮಾನ್ಯ ಗೃಹ ಸಚಿವರು |

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಕಳೆದ 5 ವರ್ಷಗಳಲ್ಲಿ ಎಷ್ಟು ಜನ ಮಹಿಳೆಯರು ಹಾಗೂ ಹೆಣ್ಣು ಮಕ್ಕಳ ನಾಪತ್ತೆ, ಕಳ್ಳಸಾಗಾಣೆ ಹಾಗೂ ಲೈಂಗಿಕ ಕಿರುಕುಳ ಪ್ರಕರಣಗಳು ದಾಖಲಾಗಿದೆ: (ವಿವರ ನೀಡುವುದು)</td><td rowspan="2">ರಾಜ್ಯದಲ್ಲಿ ಕಳೆದ 2016, 2017 2018, 2019, 2020, 2021 (ಆಗಸ್ಟ್-30) ವರೆಗೆ ದಾಖಲಾದ ಮಹಿಳೆಯರು ಹಾಗೂ ಹೆಣ್ಣು ಮಕ್ಕಳ ನಾಪತ್ತೆ, ಕಳ್ಳಸಾಗಾಣೆ ಹಾಗೂ ಲೈಂಗಿಕ ಕಿರುಕುಳಗಳಿಂದ ದಾಖಲಾದ ಪ್ರಕರಣಗಳ ವಿವರಗಳು ಈ ಕೆಳಕಂಡಂತಿದೆ, ಹಾಗೂ ದಾಖಲಾದ ಪ್ರಕರಣಗಳಲ್ಲಿ ಪತ್ತೆಯಾದ ಮತ್ತು ಪತ್ತೆಯಾಗದ ಪ್ರಕರಣಗಳ ವಿವರವನ್ನು ಅನುಬಂಧ -1 ರಲ್ಲಿ ನೀಡಲಾಗಿದೆ.<br><br>ಮಹಿಳೆಯರು
<table>
<tr><th></th><th>2016</th><th>2017</th><th>2018</th><th>2019</th><th>2020</th><th>2021 (ಆಗಸ್ಟ್)</th></tr>
<tr><td>ನಾಪತ್ತೆ</td><td>6617</td><td>7186</td><td>8167</td><td>9405</td><td>8585</td><td>6522</td></tr>
<tr><td>ಕಳ್ಳಸಾಗಾಣೆ</td><td>06</td><td>07</td><td>08</td><td>10</td><td>07</td><td>04</td></tr>
<tr><td>ಲೈಂಗಿಕ ಕಿರುಕುಳ</td><td>5040</td><td>5788</td><td>4981</td><td>4759</td><td>4540</td><td>3159</td></tr>
</table>
ಹೆಣ್ಣು ಮಕ್ಕಳು
<table>
<tr><th></th><th>2016</th><th>2017</th><th>2018</th><th>2019</th><th>2020</th><th>2021 (ಆಗಸ್ಟ್)</th></tr>
<tr><td>ನಾಪತ್ತೆ</td><td>1032</td><td>889</td><td>754</td><td>227</td><td>379</td><td>68</td></tr>
<tr><td>ಕಳ್ಳಸಾಗಾಣೆ</td><td>03</td><td>06</td><td>04</td><td>04</td><td>02</td><td>02</td></tr>
<tr><td>ಮಕ್ಕಳ ಮೇಲಿನ ಲೈಂಗಿಕ ಕಿರುಕುಳ</td><td>1713</td><td>1982</td><td>2060</td><td>2192</td><td>2136</td><td>1669</td></tr>
</table>
</td></tr>
<tr><td>ಆ)</td><td>ಇದರಲ್ಲಿ ಪತ್ತೆಯಾದ ಪ್ರಕರಣಗಳು ಎಷ್ಟು; ಪತ್ತೆಯಾಗದ ಪ್ರಕರಣಗಳೆಷ್ಟು; (ವಿವರ ನೀಡುವುದು)</td></tr>
</table>

| | | |
|---|---|---|
| ಇ) | ಪತ್ತೆಯಾಗದ ಪ್ರಕಣಗಳನ್ನು ಪತ್ತೆ ಹಚ್ಚಲು ಸರ್ಕಾರ ಕೈಗೊಂಡ ಕ್ರಮಗಳೇನು: (ವಿವರ ನೀಡುವುದು) | ಪತ್ತೆಯಾಗದ ಪ್ರಕರಣಗಳನ್ನು ಪತ್ತೆ ಹಚ್ಚಲು ಹಾಗೂ ಮಹಿಳೆಯರು ಹಾಗೂ ಹೆಣ್ಣು ಮಕ್ಕಳ ರಕ್ಷಣೆಗೆ ಸರ್ಕಾರ ಕೈಗೊಂಡ ಕ್ರಮಗಳ ಮಾಹಿತಿಯನ್ನು <u>**ಅನುಬಂಧ-2**</u> ರಲ್ಲಿ ನೀಡಲಾಗಿದೆ. |
| ಈ) | ಮಹಿಳೆಯರು ಹಾಗೂ ಹೆಣ್ಣು ಮಕ್ಕಳ ರಕ್ಷಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | |

**ಕಡತ ಸಂಖ್ಯೆ ಹೆಚ್‌ಡಿ 19ಪಿಸಿಕ್ಯೂ 2021**

(ಆರಗ ಜ್ಞಾನೇಂದ್ರ)

ಗೃಹ ಸಚಿವರು

# ಅನುಬಂಧ-1

## ANNEXURE-1

| | 2016 | | | 2017 | | | 2018 | | |
|---|---|---|---|---|---|---|---|---|---|
| MISSING | TRACED | UNTRACED | UNDER INVESTIGATION | TRACED | UNTRACED | UNDER INVESTIGATION | TRACED | UNTRACED | UNDER INVESTIGATION |
| Women | 6256 | 340 | 21 | 6820 | 330 | 36 | 7788 | 269 | 110 |
| Girls | 1021 | 11 | 0 | 877 | 11 | 1 | 732 | 7 | 15 |
| 354 IPC | 4968 | 66 | 6 | 5693 | 88 | 7 | 4919 | 47 | 15 |
| Pocso | 1697 | 16 | 0 | 1969 | 13 | 0 | 2031 | 13 | 16 |
| HumanTrafficking | | | | | | | | | |
| Women | 6 | 0 | 0 | 7 | 0 | 0 | 8 | 0 | 0 |
| Girls | 3 | 0 | 0 | 6 | 0 | 0 | 4 | 0 | 0 |

| | 2019 | | | 2020 | | | 2021 | | |
|---|---|---|---|---|---|---|---|---|---|
| MISSING | TRACED | UNTRACED | UNDER INVESTIGATION | TRACED | UNTRACED | UNDER INVESTIGATION | TRACED | UNTRACED | UNDER INVESTIGATION |
| Women | 8999 | 210 | 196 | 8156 | 41 | 388 | 5464 | 2 | 1056 |
| Girls | 221 | 0 | 6 | 371 | 1 | 7 | 46 | 0 | 22 |
| 354 IPC | 4653 | 53 | 53 | 4051 | 31 | 458 | 1241 | 3 | 1915 |
| Pocso | 2155 | 13 | 24 | 2058 | 4 | 74 | 1051 | 1 | 617 |
| HumanTrafficking | | | | | | | | | |
| Women | 9 | 0 | 1 | 5 | 0 | 2 | 1 | 0 | 3 |
| Girls | 3 | 0 | 1 | 1 | 0 | 1 | 0 | 0 | 2 |

## ಅನುಬಂಧ-2

**ಮಹಿಳೆಯರ ಮತ್ತು ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣ ಮತ್ತು ಅಕ್ರಮ ಸಾಗಣಿಕೆಯನ್ನು ತಡೆಗಟ್ಟುವ ಸಂಬಂಧ ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.**

- ಅತ್ಯಾಚಾರ, ಪೋಕ್ಸೋ ಪ್ರಕರಣಗಳ ತನಿಖೆಯನ್ನು ಅಪರಾಧ ಕಾನೂನು ತಿದ್ದುಪಡಿ ಸುಗ್ರೀವಾಜ್ಞೆ, 2018, ರಲ್ಲಿನ ತಿದ್ದುಪಡಿಯಂತೆ ನಿಗಧಿಪಡಿಸಿರುವ 60 ದಿನಗಳ ಕಾಲಮಿತಿಯಲ್ಲಿ ತನಿಖೆಯನ್ನು ಪೂರ್ಣಗೊಳಿಸಲು ಸುತ್ತೋಲೆಯನ್ನು ಹೊರಡಿಸಿದೆ.
- ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳ ಕುರಿತು ತನಿಖೆಯಲ್ಲಿ ಉಪಯೋಗವಾಗುವ ಅಂಶಗಳಿಗೆ ಸಂಬಂಧಿಸಿದಂತೆ ನಿರ್ಧಿಷ್ಟ ಕಾರ್ಯ ವಿಧಾನವನ್ನು ಸಿದ್ದಪಡಿಸಿ, ಎಲ್ಲಾ ಘಟಕಾಧಿಕಾರಿಗಳಿಗೆ ಕಳುಹಿಸಲಾಗಿರುತ್ತದೆ.
- ಬೆಂಗಳೂರು ನಗರದಲ್ಲಿ ಮಹಿಳೆಯರ ರಕ್ಷಣೆಗಾಗಿ, ಮಹಿಳಾ ಸಹಾಯವಾಣಿ 1091, 22943225 ಕಾರ್ಯ ನಿರ್ವಹಿಸುತ್ತಿದ್ದು, ಸ್ಪಂದನ ಸಹಾಯವಾಣಿಯು ಸಹ ಸ್ಥಾಪಿಸಿ ಕಾರ್ಯನಿರ್ವಹಿಸಲಾಗುತ್ತಿದೆ.
- ಬೆಂಗಳೂರು ನಗರ ಮತ್ತು ರಾಜ್ಯದ ಎಲ್ಲಾ ಪೊಲೀಸ್ ಠಾಣೆಗಳಲ್ಲಿ ಮಹಿಳೆಯರ ದೂರು ವಿಚಾರಣೆ ಬಗ್ಗೆ ಪ್ರತ್ಯೇಕವಾಗಿ ಮಹಿಳಾ ಹೆಲ್ಪ್ ಡೆಸ್ಕ್ ಸ್ಥಾಪಿಸಲಾಗಿದೆ.
- ದಿನದ 24 ಗಂಟೆಯೂ ಸಹ ಮಹಿಳೆಯರ ಮತ್ತು ಮಕ್ಕಳ ಸುರಕ್ಷತೆಗಾಗಿ "ಪಿಂಕ್ ಹೊಯ್ಸಳ" ಮತ್ತು 112 ಗಸ್ತುವಾಹನ ಗಸ್ತು ಕಾರ್ಯ ನಿರ್ವಹಿಸುತ್ತಿವೆ.
- ರಾಜ್ಯದ ಇತರೆ ಜಿಲ್ಲೆಗಳಾದ ಬಾಗಲಕೋಟೆ ಜಿಲ್ಲೆಯಲ್ಲಿ ಚನ್ನಮ್ಮ ಪಡೆ, ಬಳ್ಳಾರಿ ಜಿಲ್ಲೆಯಲ್ಲಿ ಓಬವ್ವ ಪಡೆ, ದಾವಣಗೆರೆ ಜಿಲ್ಲೆಯಲ್ಲಿ ದುರ್ಗಾ ಪಡೆ, ಗದಗ ಜಿಲ್ಲೆಯಲ್ಲಿ ಚನ್ನಮ್ಮ ಪಡೆ, ಉತ್ತರ ಕನ್ನಡ ಜಿಲ್ಲೆಯಲ್ಲಿ ಶರಾವತಿ ಓಬ್ಬವ್ವ ಪಡೆ, ಬೀದರ್ ಜಿಲ್ಲೆಯಲ್ಲಿ ರಾಣಿ ಚನ್ನಮ್ಮ ವಾಹನವು ಹೆಚ್ಚಾಗಿ ಮಹಿಳೆಯರು ಓಡಾಡುವ ಜನನಿಬೀಡ ಸ್ಥಳಗಳಲ್ಲಿ ಹಾಗೂ ಶಾಲಾ ಕಾಲೇಜುಗಳ ಬಳಿ ಹೆಚ್ಚಿನ ಗಸ್ತು ಕಾರ್ಯವನ್ನು ನಿರ್ವಹಿಸುತ್ತಿರುತ್ತದೆ.
- ಮಹಿಳೆಯರು ಕರ್ತವ್ಯ ನಿರ್ವಹಿಸುವ ಎಲ್ಲಾ ಕಛೇರಿಗಳು, ಸಂಸ್ಥೆಗಳು, ಕಾರ್ಖಾನೆಗಳಲ್ಲಿ ವಿಶೇಷವಾಗಿ ಸುರಕ್ಷತೆಯ ಬಗ್ಗೆ ಮಹಿಳಾ ಸೆಕ್ಯೂರಿಟಿಗಳನ್ನು ನಿಯೋಜಿಸುವಂತೆ ಸೂಚಿಸಲಾಗಿದೆ.
- ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ ಭಾಗಿಯಾದ ಆರೋಪಿಗಳನ್ನು ಶೀಘ್ರವಾಗಿ ಬಂಧಿಸಿ ಆರೋಪಿಗಳ ವಿರುದ್ಧ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಲಾಗುತ್ತಿದೆ.
- ಹಗಲು ಮತ್ತು ರಾತ್ರಿ ವೇಳೆಯಲ್ಲಿ ಕೆಲಸಕ್ಕೆ ಹೋಗುವ ಮಹಿಳೆಯರ ಸುರಕ್ಷತೆಗೆ ಸಕಲ ಮುನ್ನೆಚ್ಚರಿಕೆ ವಹಿಸುವಂತೆ ಸಂಬಂಧಪಟ್ಟ ಕಂಪನಿಗಳು, ಕಾಲ್ ಸೆಂಟರ್‌ಗಳ, ಪಿಜಿ ಸೆಂಟರ್‌ಗಳ

ಮಾಲೀಕರಿಗೆ/ವ್ಯವಸ್ಥಾಪಕರಿಗೆ ಸಲಹೆ, ಸೂಚನೆಗಳನ್ನು ನೀಡಲಾಗುತ್ತಿದೆ.

- ಮಹಿಳೆಯರು ಓಡಾಡುವ ಸ್ಥಳಗಳ ಬಳಿ, ಬಸ್ ನಿಲ್ದಾಣದಲ್ಲಿ, ಶಾಲಾ ಕಾಲೇಜ್‌ಗಳ ಬಳಿ ಸಿಬ್ಬಂದಿಗಳನ್ನು ಪಾಯಿಂಟ್ ಕರ್ತವ್ಯಕ್ಕೆ ನೇಮಕ ಮಾಡಲಾಗುತ್ತಿದ್ದು, ಸದರಿ ಸ್ಥಳಗಳ ಬಳಿ ಹೊಯ್ಸಳ ಹಾಗೂ ಚೀತಾ ವಾಹನಗಳನ್ನು ಗಸ್ತು ಮಾಡಿ ಇಂತಹ ಕೃತ್ಯಗಳು ನಡೆಯದಂತೆ ಸೂಕ್ತ ಮುನ್ನೆಚ್ಚರಿಕೆಯನ್ನು ಕೈಗೊಳ್ಳಲಾಗಿದೆ.
- ಮಹಿಳೆಯರ ಸರಗಳ್ಳತನ ತಡೆಗಟ್ಟುವ ಸಲುವಾಗಿ, ಅರಿವು ಮೂಡಿಸುವ ಕಾರ್ಯಕ್ರಮ ನಡೆಸಲಾಗುತ್ತಿದ್ದು, ಮುಂಜಾಗ್ರತಾ ಕ್ರಮವಾಗಿ, ಪ್ರಮುಖ ಸ್ಥಳಗಳಲ್ಲಿ ಸಿ.ಸಿ.ಟಿ.ವಿ. ಕ್ಯಾಮೆರಾಗಳನ್ನು ಅಳವಡಿಸಲಾಗುತ್ತಿದೆ ಹಾಗು ಈ ಸಂಬಂಧ ಕರಪತ್ರಗಳು ಹಾಗು ಪೋಸ್ಟರ್‌ಗಳ ಮೂಲಕ ಮಹಿಳೆಯರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ.
- ಮಹಿಳೆಯರು ಮತ್ತು ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಕೆಲಸ ಮಾಡುವ ಕಛೇರಿಗಳಲ್ಲಿ ಆಂತರಿಕ ದೂರು ನಿರ್ವಹಣಾ ಸಮಿತಿಯನ್ನು ರಚಿಸಲಾಗಿರುತ್ತದೆ.
- ಸಂಕಷ್ಟದಲ್ಲಿರುವ/ತೊಂದರೆಯಲ್ಲಿರುವ ಮಹಿಳೆಯ ಸಹಾಯ ಹಾಗೂ ಸುರಕ್ಷೆಗಾಗಿ ಮಹಿಳೆ ಸುರಕ್ಷಾ ಆ್ಯಪ್ ಅನ್ನು ಪರಿಚಯಿಸಲಾಗಿದೆ. ಈ ಮಹಿಳಾ ಸುರಕ್ಷಾ ಆ್ಯಪ್ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದೆ.
- ಸದರಿ ವಿಶೇಷ ಪಡೆಗಳಲ್ಲಿ ವಿಶೇಷವಾಗಿ ಮಹಿಳಾ ಪೋಲೀಸ್ ಸಿಬ್ಬಂದಿಗಳನ್ನು ನಿಯೋಜಿಸಿದ್ದು ಅವರುಗಳಿಂದ ಎಲ್ಲಾ ಶಾಲಾ/ಕಾಲೇಜುಗಳ ಹತ್ತಿರ ಮತ್ತು ಮಹಿಳೆಯರು & ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಸೇರುವ ಪ್ರದೇಶಗಳು ಹಾಗೂ ಜನನಿಬಿಡ ಸ್ಥಳಗಳಲ್ಲಿ ವಿಶೇಷ ಗಸ್ತು ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ.
- ಸದರಿ ಸಿಬ್ಬಂದಿ ರವರು ತೆರೆದ ಮನೆ ಯೋಜನೆಯ ಮೂಲಕ ಮಕ್ಕಳಿಗಾಗಿ ಹಾಗು ಜನ ಸಂಪರ್ಕ ಸಭೆಯ ಮೂಲಕ ಮಹಿಳೆಯರಿಗೆ ಸ್ವಯಂ ರಕ್ಷಣೆಯ ಬಗ್ಗೆ ಕರಾಟೆ ಮತ್ತು ಕೆಲವು ಕೌಶಲ್ಯಗಳ ಬಗ್ಗೆ ಪ್ರಾತ್ಯಕ್ಷಿಕೆಯ ಮೂಲಕ ಜಾಗೃತಿ ಮೂಡಿಸಲಾಗುತ್ತಿರುತ್ತದೆ.
- ಮಹಿಳೆಯರು ಮತ್ತು ಹೆಣ್ಣು ಮಕ್ಕಳ ಮೇಲೆ ನಡೆಯುತ್ತಿರುವ ದೌರ್ಜನ್ಯಗಳನ್ನು ಹತ್ತಿಕ್ಕುವ ನಿಟ್ಟಿನಲ್ಲಿ ಬೆಂಗಳೂರು ನಗರದಲ್ಲಿ "ವೀರವನಿತೆ" ತಂಡವನ್ನು ರಚಿಸಿ, ಸದರಿಯವರಿಗೆ 6 ತಿಂಗಳು ನುರಿತ ತಜ್ಞರಲ್ಲಿ ಸ್ವಯಂ ರಕ್ಷಣೆ ಮತ್ತು ಮಾರ್ಷಿಯಲ್ ಆರ್ಟ್ಸ್ ಬಗ್ಗೆ ತರಬೇತಿ ನೀಡಿ, ನಂತರ ಸದರಿ ಯವರುಗಳನ್ನು 3 ತಂಡಗಳನ್ನಾಗಿ ರಚಿಸಿ ಮೇಲಾಧಿಕಾರಿಗಳ ನೇತೃತ್ವದಲ್ಲಿ ನಗರದ ವಿವಿಧ ಶಾಲಾ-ಕಾಲೇಜುಗಳು ಮತ್ತು ಮಹಿಳೆಯರು ಹೆಚ್ಚಾಗಿ ಕೆಲಸ ನಿರ್ವಹಿಸುವ ಗಾರ್ಮೆಂಟ್ಸ್‌ಗಳು, ಮಾಲ್ ಮತ್ತಿತರ ಕಡೆಗಳಲ್ಲಿ ಸದರಿಯವರುಗಳಿಗೆ ಸ್ವಯಂ ರಕ್ಷಣೆಯ ಬಗ್ಗೆ ಮಾಹಿತಿ ಹಾಗೂ ತರಬೇತಿಗಳನ್ನು ನೀಡಲಾಗಿರುತ್ತದೆ.
  - ಕಾಣೆಯಾದ ಪ್ರಕರಣಗಳ ಮಾಹಿತಿಯನ್ನು ಕೇಂದ್ರ ಸರ್ಕಾರದ ಮಿಸ್ಸಿಂಗ್ ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಲಾಗುತ್ತಿದೆ. ಆ ಮೂಲಕ ಅಂತರ್‌ರಾಜ್ಯ ಕಾಣೆ ಪ್ರಕರಣಗಳ ಮಾಹಿತಿಯನ್ನು ಪಡೆಯಬಹುದಾಗಿರುತ್ತದೆ.
  - ಕಾಣೆಯಾದ ಪ್ರಕರಣಗಳಲ್ಲಿ ತನಿಖೆ ಮತ್ತು ಪತ್ತೆ ಕಾರ್ಯವನ್ನು ಸಮರ್ಪಕವಾಗಿ ಹಾಗೂ

ವ್ಯವಸ್ಥಿತವಾಗಿ ಕೈಗೊಳ್ಳಲು ಅನುವಾಗುವಂತೆ ನಿರ್ಧಿಷ್ಟ ಕಾರ್ಯ ವಿಧಾನ (ಎಸ್‌ಓಪಿ) ಅನ್ನು ಸಿದ್ದಪಡಿಸಿ ರಾಜ್ಯದ ಎಲ್ಲಾ ಘಟಕಾಧಿಕಾರಿಗಳಿಗೆ ಕಳುಹಿಸಲಾಗಿರುತ್ತದೆ.

- ನಾಲ್ಕು ತಿಂಗಳಿಗೂ ಮೇಲ್ಪಟ್ಟು ಪತ್ತೆಯಾಗದ ಮಕ್ಕಳ ಕಾಣೆ ಪ್ರಕರಣಗಳನ್ನು ಮಾನವ ಕಳ್ಳ ಸಾಗಣೆ ನಿಗ್ರಹ ಘಟಕ/ಸಿ.ಇ.ಎನ್ ಪೊಲೀಸ್ ಠಾಣೆಗಳಿಗೆ ತನಿಖೆಗಾಗಿ ವರ್ಗಾಯಿಸಲು ಘಟಕಾಧಿಕಾರಿಗಳಿಗೆ ನಿರ್ದೇಶಿಸಲಾಗಿರುತ್ತದೆ.
- ಮಾನವ ಕಳ್ಳಸಾಗಾಣಿಕೆಯನ್ನು ತಡೆಗಟ್ಟಲು ಹಾಗೂ ನಿಯಂತ್ರಿಸಲು ಸರ್ಕಾರವು ನಿರ್ಭಯ ನಿಧಿ ಅಡಿಯಲ್ಲಿ ಮಾನವ ಕಳ್ಳ ಸಾಗಾಣಿಕೆ ನಿಷೇಧ ಘಟಕಗಳನ್ನು ಸ್ಥಾಪಿಸಲು ಅನುಧಾನವನ್ನು ಬಿಡುಗಡೆ ಮಾಡಿರುತ್ತದೆ.
- ಸದರಿ ಅನುಧಾನದಲ್ಲಿ ರಾಜ್ಯದ ಎಲ್ಲಾ ನಗರ/ಜಿಲ್ಲೆಗಳಲ್ಲಿ ಮಾನವ ಕಳ್ಳ ಸಾಗಾಣಿಕೆ ನಿಷೇಧ ಘಟಕವನ್ನು ಸ್ಥಾಪಿಸಿದ್ದು, ಸದರಿ ಘಟಕಗಳು ಮಹಿಳಾ ಪೊಲೀಸ್ ಠಾಣೆಗಳ ಠಾಣಾಧಿಕಾರಿಗಳು ಉಸ್ತುವಾರಿಯಲ್ಲಿ ಕಾರ್ಯನಿರ್ವಹಿಸುತ್ತಿದೆ.
- ಪ್ರತಿ ಮಾನವ ಕಳ್ಳಸಾಗಾಣಿಕೆ ಘಟಕಗಳಿಗೆ ಹಿರಿಯ ಮತ್ತು ಕಿರಿಯ ಮಕ್ಕಳ ಕಲ್ಯಾಣಾಧಿಕಾರಿಗಳನ್ನು ನಿಯೋಜಿಸಿ, ಅವರುಗಳಿಗೆ ತರಬೇತಿ ನೀಡಲಾಗಿರುತ್ತದೆ.
- ಮಾನವ ಸಾಗಣಿಕೆ ಮಾಡುವವರ ವಿರುದ್ಧ ಬಾತ್ಮಿ ಸಂಗ್ರಹಿಸಿ ತಪ್ಪಿತಸ್ಥರ ವಿರುದ್ಧ ಕಲಂ.370, 370[ಎ] ಐಪಿಸಿ ಮತ್ತು ಇಮ್‌ಮೋರಲ್ ಟ್ರಾಫಿಕಿಂಗ್ ಪ್ರಿವೆನ್ಸ್ ಆಕ್ಟ್ (ಐ.ಟಿ.ಪಿ.ಎ) ಹಾಗೂ ಸಂಬಂಧಪಟ್ಟ ಇತರೆ ಕಾಯ್ದೆ ಮತ್ತು ಕಲಂ ರೀತ್ಯಾ ಪ್ರಕರಣಗಳನ್ನು ದಾಖಲಿಸಿ, ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುತ್ತಿದೆ.
- ಮಾನವ ಕಳ್ಳಸಾಗಾಣಿಕೆಯ ಪ್ರಕರಣಗಳ ತನಿಖೆಯನ್ನು ಸಮರ್ಥವಾಗಿ ನಿರ್ವಹಿಸಲು ತನಿಖಾಧಿಕಾರಿಗಳಿಗಾಗಿ ನಿಧಿಷ್ಟ ಕಾರ್ಯವಿಧಾನವನ್ನು ಸಿದ್ದಪಡಿಸಿ, ಸ್ಥಾಯಿ ಆದೇಶದ ಮೂಲಕ ರಾಜ್ಯ ಎಲ್ಲಾ ಘಟಕಾಧಿಕಾರಿಗಳಿಗೆ ಕಳುಹಿಸಿಕೊಡಲಾಗಿದೆ.
- ಅಪರಿಚಿತ ವ್ಯಕ್ತಿಗಳ ಬಳಿ ಸಂಪರ್ಕ ಇಟ್ಟುಕೊಳ್ಳದಂತೆ, ಆಸೆ ಆಮಿಷಗಳನ್ನು ಒಡ್ಡುವ ಆಸಾಮಿಗಳ ಬಗ್ಗೆ ಮಹಿಳೆಯರಿಗೆ & ಮಕ್ಕಳಿಗೆ ಹಾಗೂ ಗ್ರಾಮಗಳಲ್ಲಿ ಸೂಕ್ತ ತಿಳುವಳಿಕೆಗಳನ್ನು ನೀಡಲಾಗಿರುತ್ತದೆ.
- ಚಾಲ್ತಿಯಲ್ಲಿರುವ ಸಾಮಾಜಿಕ ಜಾಲತಾಣಗಳಾದ ಬ್ಲಾಗ್, ಟ್ವಿಟರ್, ಫೇಸ್ ಬುಕ್, ಪೊಲೀಸ್ ವೆಬ್ ಸೈಟ್ ಹಾಗೂ ಇತರೆ ಜಾಲತಾಣಗಳ ಮೂಲಕ ಮಾನವ ಕಳ್ಳ ಸಾಗಾಣಿ ಬಗ್ಗೆ ಜಾಗೃತಿ ಮೂಡಿಸುವ ಸಂದೇಶವನ್ನು ಪ್ರಕಟಿಸಲಾಗಿದೆ.
- ಮಾಸಿಕ ಅಪರಾಧ ಪರಾಮರ್ಶೆ ಸಭೆಗಳಲ್ಲಿ ಸಂಬಂಧಿಸಿದ ಪೊಲೀಸ್ ಅಧೀಕ್ಷಕರು/ ಉಪ ಪೊಲೀಸ್ ಆಯುಕ್ತರು ಬಾಕಿಯಿರುವ ಕಾಣೆ ಪ್ರಕರಣಗಳನ್ನು ಪರಿಶೀಲಿಸಲು ನಿರ್ದೇಶಿಸಲಾಗಿದ್ದು, ಈ ಕುರಿತು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.